## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 790/2017

ಸಾಕ್ಷಿಗೆ ದಿನಾಂಕ 04-07-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 4 P.W.: 3

| | | |
|---|---|---|
| ಹೆಸರು | : | ಡಿ ಕೆ ಅಂಬಣ್ಣ |
| ತಂದೆಯ ಹೆಸರು | : | ಕಟ್ಟೆಪ್ಪ |
| ವಯಸ್ಸು | : | 71 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಬೆಣಕಲ್ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಸಾಕ್ಷಿಗೆ ನಿಪಿ-4 ಜಪ್ತು ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-4 ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ನಾನು 8-9 ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಮಾಡಿದ್ದೇನೆ. ಆ ಸಮಯದಲ್ಲಿ ಪೋಲೀಸರು ಒಂದು ಪೋಟೋ ತೆಗೆದುಕೊಂಡರು. ಸಾಕ್ಷಿಯು ನಿಪಿ-5 ರ ಪೋಟೋ ನೋಡಿ ಗುರುತಿಸಿರುತ್ತಾರೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಿಪಿ-4 ರ ಮಹಜರಿನಲ್ಲಿ ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ ಮತ್ತು ನನ್ನ ಸಮಕ್ಷಮ ಪೋಲೀಸರು ಯಾವುದೇ ಮಹಜರು ಮಾಡಿಲ್ಲ. ನನ್ನ ಸಮಕ್ಷಮ ಪೋಲೀಸರು ಲಗ್ನಪತ್ರಿಕೆ, ಮದುವೆ ಪೋಟೋಗಳನ್ನು ಚಾಸಾ-1 ರವರಿಂದ ನಿಪಿ-4 ರ ಮೂಲಕ ಸ್ವೀಕರಿಸಿರುವುದಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ದಿಃ24-01-2017 ರಂದು ಟಿ ಬಿ ಹಳ್ಳಿ ಪೋಲೀಸರು ಬೆಳಿಗ್ಗೆ 9.15 ರಿಂದ 10 ಗಂಟೆಯವರೆಗೆ ಪೋಲೀಸ್ ಠಾಣೆಯಲಿಲ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಚಾಸಾ-1 ರವರು ಹಾಜರುಪಡಿಸಿದ ಲಗ್ನಪತ್ರಿಕೆ ಮತ್ತು ಪೋಟೋಗಳನ್ನು ಸದರಿ ಪಂಚನಾಮೆ ಮೂಲಕ ಜಪ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಅದಕ್ಕೆ ಸಂಬಂಧಿಸಿದಂತೆ ನಿಪಿ-5 ಪೋಟೋ ತೆಗೆದಿರುತ್ತಾರೆಂದರೆ ಸರಿಯಲ್ಲ. ನಿಪಿ-4 ರಲ್ಲಿ ಬರೆದಿರುವ ವಿಚಾರವನ್ನು ನಾನು ಸಂಪೂರ್ಣವಾಗಿ

ತಿಳಿದುಕೊಂಡು ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಘಟನೆಯ ಕುರಿತು ನಾನು ಪೋಲೀಸರ ಮುಂದೆ ದಿಃ 24-12-2016 ರಂತೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-11 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ</u>

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ